1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ,
ಕುಂದಾಪುರ

ಸಿ.ಸಿ. ನಂಬ್ರ: 1783/2013

ಚಾಸಾ: 28 ಪ್ರಾಸಾ:14

ದಿನಾಂಕ: 02.02.2026

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಮಹಾಬಲ ಶೆಟ್ಟಿ |
| ತಂದೆಯ ಹೆಸರು | : | ಲೇಟ್ ಹೆರಿಯಣ್ಣ ಶೆಟ್ಟಿ |
| ವಯಸ್ಸು | : | 66 ವರ್ಷ |
| ಉದ್ಯೋಗ | : | ನಿವೃತ್ತ ಪಿ ಎಸ್ ಐ |
| ವಾಸ ಸ್ಥಳ | : | ಜನ್ನಾಲೆ |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನಾನು 2012 ಜೂನ್ ರಿಂದ 2013 ಡಿಸೆಂಬರ್ ರವರೆಗೆ ಕುಂದಾಪುರದ ಪೊಲೀಸ್ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ: 2811/2012 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಬೆಳಿಗ್ಗೆ 10-30 ಗಂಟೆ ಸಮಯಕ್ಕೆ ಚಾಸಾ-1ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಅಪರಾಧ ಕ್ರಮಾಂಕ 325/2012 ರಂತೆ ಪ್ರಕರಣವನ್ನು ದಾಖಲಿಸಿ ಪ್ರ.ವ.ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೂ ಮತ್ತು ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ಚಾಸಾ-1 ರವರ ವೈದ್ಯಕೀಯ ಚಿಕಿತ್ಸೆ ಬಗ್ಗೆ ಡಬ್ಲೂಪಿಸಿ 2250ರವರನ್ನು ಕೋರಿಕೆ ಪತ್ರದೊಂದಿಗೆ ಕಳುಹಿಸಿರುತ್ತೇನೆ.

ಸದ್ರಿ ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವರದಿಯನ್ನು ನಿಪಿ-14 ಎಂದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-14(ಎ) ಎಂದು ಗುರುತಿಸಲಾಯಿತು. ನಂತರ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-30ರವರಿಗೆ ಹಸ್ತಾಂತರಿಸಿರುತ್ತೇನೆ.

<u>**ಪಾಟೀ ಸವಾಲುಃ ಆರೋಪಿತರ ಪರ ವಕೀಲರಾದ ಶ್ರೀ ಆರ್ ಕೆ ಎಂ ರವರಿಂದಃ**</u>

ಚಾಸಾ-1 ರವರೊಂದಿಗೆ ಯಾರಾದರೂ ಬಂದಿದ್ದಾರಾ ಎಂದು ನೆನಪಿಲ್ಲ. ನಿಪಿ-1 ರಲ್ಲಿರುವ ಕೈ ಬರಹ ಯಾರದ್ದು ಎಂದು ನನಗೆ ತಿಳಿದಿಲ್ಲ. ಚಾಸಾ-1 ರವರು ಠಾಣೆಗೆ ಬರುವ ವೇಳೆಗೆ ಲಿಖಿತ ಪಿರ್ಯಾದನ್ನು ತಂದಿರಲಿಲ್ಲ ಎಂದರೆ ಸರಿಯಲ್ಲ. ಠಾಣೆಗೆ ಬಂದ ನಂತರ ನಮ್ಮ ಸಿಬ್ಬಂದಿಯವರು ಒಕ್ಕಣೆಯನ್ನು ಹೇಳಿ ಆಕೆಯಿಂದ ಬರೆಯಿಸಿರುತ್ತಾರೆ ಎಂದರೆ ಸರಿಯಲ್ಲ. ಚಾಸಾ-1 ರವರು ಯಾವುದೇ ಪಿರ್ಯಾದನ್ನು ಠಾಣೆಯಲ್ಲಿ ನೀಡಿರಲಿಲ್ಲ ಎಂದರೆ ಸರಿಯಲ್ಲ. ನಿಪಿ-1ನ್ನು ಠಾಣೆಯಲ್ಲಿ ತಯಾರಿಸಿದ್ದು ಎಂದರೆ ಸರಿಯಲ್ಲ.

ಚಾಸಾ-1 ರವರು ಠಾಣೆಯಲ್ಲಿ ಅರ್ಧಗಂಟೆಗೂ ಹೆಚ್ಚಾಗಿ ಇದ್ದರು. ಅನಂತರ ಆಕೆಯನ್ನು ವೈದ್ಯಾಧಿಕಾರಿಯ ಬಳಿ ಕಳುಹಿಸಿರುತ್ತೇನೆ. ಠಾಣೆಗೆ ಬಂದಾಗ ಚಾಸಾ-1ರವರ ದೇಹದಲ್ಲಿ ಘಟನೆಗಳ ಕುರುಹು ಇದ್ದ ಬಗ್ಗೆ ಗಮನಿಸಿಲ್ಲ. ಆಕೆ ಠಾಣೆಯಲ್ಲಿ ಇದ್ದ ಅವಧಿಯಲ್ಲಿ ನಾನು ಅವರ ಹೆಚ್ಚುವರಿ ಹೇಳಿಕೆಗಳನ್ನು ದಾಖಲಿಸಿಕೊಂಡಿಲ್ಲ. ವೈದ್ಯರ ಬಳಿ ಹೋಗುವಂತೆ ನಾನೇ ಸ್ವತಹ ಕಳುಹಿಸಿ ಕೊಟ್ಟಿರುತ್ತೇನೆ. ವೈದ್ಯಾಧಿಕಾರಿಗಳಿಗೆ ಭೇಟಿ ನೀಡುವ ಯಾವುದೇ ಅವಶ್ಯಕತೆ ಚಾಸಾ-1ರವರಿಗೆ ಇರಲಿಲ್ಲ ಎಂದರೆ ಸರಿಯಲ್ಲ. ದಾಖಲಾತಿಗಳನ್ನು ಸೃಷ್ಟಿಸುವ ಉದ್ದೇಶದಿಂದ ಚಾಸಾ-1 ರವರನ್ನು ವೈದ್ಯರ ಬಳಿ ಕಳುಹಿಸಿದ್ದು ಎಂದರೆ ಸರಿಯಲ್ಲ.

<u>**ಮರು ವಿಚಾರಣೆಃ**</u> <u>ಇಲ್ಲ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**